ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಬಗ್ಗೆ

ಶ್ರೀ. ಶ್ರೀ ಎಲ್. ಆರ್. ಶಿವರಾಮೇಗೌಡ. (ನಾಗಮಂಗಲ).—ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿ, ನಿವೇಶನ ದೊರಕದೇ ಇರುವವರ ಸಂಖ್ಯೆ ಎಷ್ಟು ?

ಆ) ಪ್ರಸ್ತುತ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ ಭೂಮಿಯಿಂದ ಎಷ್ಟು ಅರ್ಜಿದಾರರಿಗೆ ನಿವೇಶನಗಳನ್ನು ಒದಗಿಸಿಬಹುದು.

ಇ) ಬೆಂಗಳೂರಿನ ವಸತಿ ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರದವರು ಯೋಚಿಸಿರುವ ನಿರ್ದಿಷ್ಟ ಕಾರ್ಯಕ್ರಮಗಳೇನು ?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯಮಂತ್ರಿಗಳು).—

ಅ) ೮೯,೦೩೫ ಅರ್ಜಿದಾರರು

ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿರುವ ಭೂಮಿಯಿಂದ ೮೦೦ ನಿವೇಶನಗಳನ್ನು ಒದಗಿಸಬಹುದು.

ಇ) ೧೯೯೦-೯೧ನೇ ಸಾಲಿನಲ್ಲಿ ಪ್ರಾಧಿಕಾರವು ಸ್ವಯಂ ನೆರವು ಯೋಜನೆ ಹಾಗೂ ಹುಡ್ಕೋ ನೆರವಿನಡಿ ಯೋಜನೆಗಳಲ್ಲಿ ೨,೩೦೨ ಮನೆಗಳನ್ನು ಕಟ್ಟಲು ಹಾಗೂ ೧೦,೦೦೦ ನಿವೇಶನಗಳನ್ನು ಅಭಿವೃದ್ಧಿಪಡಿಸಲು ಯೋಜನೆ ಹಮ್ಮಿಕೊಂಡಿದೆ

ಶಿವಮೊಗ್ಗ ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ಆಗಿರುವ ನಷ್ಟದ ಬಗ್ಗೆ

ಶ್ರೀ. ಶ್ರೀ ಎಲ್ ಆರ್ ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಸಹಕಾರ ರಾಜ್ಯ ಮಂತ್ರಿಗಳ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.—

ಅ) ಶಿವಮೊಗ್ಗ ಜಿಲ್ಲೆಯ ಸಾಗರದ ಅಡಿಕೆ ಸಂಸ್ಕರಣ ಮತ್ತು ಮಾರಾಟ ಸಹಕಾರಿ ಸಂಘದಲ್ಲಿ ಸುಮಾರು ೫೦ ಲಕ್ಷ ರೂ ಅಧಿಕ ಮೌಲ್ಯದ ಅಡಿಕೆ ನಾಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಮೇಲ್ಕಂಡ ಪ್ರಕರಣದಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಸರ್ಕಾರದವರು ಕೈಗೊಂಡಿರುವ ಇಲಾಖಾ ಹಾಗೂ ಕಾನೂನು ಕ್ರಮಗಳೇನು ?

ಡಾ. ಹೆಚ್. ಆರ್. ರಾಜು (ಸಹಕಾರ ರಾಜ್ಯ ಮಂತ್ರಿಗಳು).—

ಅ) ಬಂದಿದೆ.